ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

2019ರಲ್ಲಿ ಕೊಡಗು ಜಿಲ್ಲೆಯಲ್ಲಿ ಸಂಭವಿಸಿದ ಪ್ರಕೃತಿ ವಿಕೋಪದಲ್ಲಿ ಸಂತ್ರಸ್ತರಾದವರಿಗೆ ಪುನರ್ವಸತಿ ಕಲ್ಪಿಸುವ ಕುರಿತು

ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :-

241 (278) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2019ರಲ್ಲಿ ಕೊಡಗು ಜಿಲ್ಲೆಯಲ್ಲಿ ಸಂಭವಿಸಿದ ಭೂಕುಸಿತ ಹಾಗೂ ಪ್ರವಾಹದಿಂದಾಗಿ ಮನೆ ಹಾಗೂ ನಿವೇಶನಗಳನ್ನು ಕಳೆದುಕೊಂಡ ನಿರಾಶ್ರಿತರಾದವರಿಗೆ ಪುನರ್ವಸತಿ ಹಾಗೂ ಪರಿಹಾರ ದೊರೆಯದೆ ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರ ಈ ಕುರಿತು ಕೈಗೊಂಡಿರುವ ಪರಿಹಾರದ ಕ್ರಮಗಳೇನು;

(ಇ) ಜಿಲ್ಲೆಯಲ್ಲಿ 2019ರ ಪ್ರಕೃತಿ ವಿಕೋಪದಲ್ಲಿ ನಿರಾಶ್ರಿತರಾದವರ ವಿವರ ಹಾಗೂ ಪರಿಹಾರ ದೊರಕಿದ್ದಲ್ಲಿ ಆ ಫಲಾನುಭವಿಗಳ ವಿವರ ನೀಡುವುದು; ಇದುವರೆಗೂ ಹಲವರಿಗೆ ಪರಿಹಾರ ದೊರೆಯದಿರಲು ಕಾರಣಗಳೇನು ?